ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2008 (2361)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ಕಛೇರಿಯನ್ನು ವಿಜಯಪುರದಲ್ಲಿ ಪ್ರಾರಂಭಿಸುವ ಬಗ್ಗೆ

(ಅ) ಸರ್ಕಾರಿ ಆದೇಶ ಸಂಖ್ಯೆ: ಆಕುಕ 174 ಎಚ್.ಎಸ್.ಎಚ್ 2019, ಬೆಂಗಳೂರು ದಿನಾಂಕ: 24/07/2019ರ ರೀತ್ಯಾ ವಿಜಯಪುರದಲ್ಲಿ ಅಪರ ನಿರ್ದೇಶಕರ ಕಛೇರಿಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಪ್ರಾರಂಭವಾಗಿದ್ದಲ್ಲಿ, ಸದರಿ ಕಛೇರಿಯನ್ನು ಯಾವ ವರ್ಷದಲ್ಲಿ ಮತ್ತು ವಿಜಯಪುರದ ಯಾವ ಸ್ಥಳ ಮತ್ತು ಯಾವ ಕಟ್ಟಡದಲ್ಲಿ ಪ್ರಾರಂಭಿಸಲಾಗಿದೆ; ಈ ಕಛೇರಿಗೆ ಸ್ವಂತ ಕಟ್ಟಡ ಒದಗಿಸಲಾಗಿದೆಯೇ ;

(ಇ) ಸದರಿ ಕಛೇರಿಗೆ ಅವಶ್ಯವಿರುವ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ;

(ಈ) ಸದರಿ ಕಛೇರಿಯ ಅನುಷ್ಠಾನಕ್ಕಾಗಿ ಬಳಸಲಾಗಿರುವ ಅನುದಾನ ಎಷ್ಟು ; ಇಲ್ಲವಾದಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ;

(ಉ) ಈ ಕಛೇರಿಯ ಅಧಿಕಾರಿಗಳ ಪ್ರವಾಸಕ್ಕೆ ವಾಹನ ಸೌಲಭ್ಯ ಒದಗಿಸಲಾಗಿದೆಯೇ ?